**MARCH 26, 2025**
**AKASHAVANI - DHARWAD**
**REGIONAL NEWS BULLETIN (KANNADA) 07.05 A.M.**

<><><>

**ಮುಖ್ಯಾಂಶಗಳು**

- **ಬೇಸಿಗೆ ಹಿನ್ನೆಲೆ, ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಲು ಸಚಿವ ಶರಣ್ ಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚನೆ.**
- **ವಿಜ್ಞಾನ ಮತ್ತು ತಂತ್ರಜ್ಞಾನ, ವೈಜ್ಞಾನಿಕ ಸಂಶೋಧನೆಗೆ ಸಹಕಾರಿ – ಸಚಿವ ಎನ್.ಎಸ್.ಭೋಸರಾಜು.**
- **ರಾಜ್ಯದ ಆರ್ಥಿಕ ಬಲವರ್ಧನೆಯಲ್ಲಿ ಪಶು ಸಂಗೋಪನಾ ಹಾಗೂ ಮೀನುಗಾರಿಕೆ ವಲಯಗಳ ಪಾತ್ರ ಮಹತ್ವದ್ದು – ಸಚಿವ ಕೆ.ವೆಂಕಟೇಶ್**
- **ಅರ್ಜಿ ಸ್ವೀಕರಿಸದೇ, ಅರ್ಹ ಸಾಧಕರಿಗೆ ಪ್ರಶಸ್ತಿ ನೀಡುವ ಕುರಿತು ಕ್ರಮ ಕೈಗೊಳ್ಳಲು ಮುಖ್ಯಮಂತ್ರಿಯವರೊಂದಿಗೆ ಚರ್ಚೆ– ಸಚಿವ ಶಿವರಾಜ ತಂಗಡಗಿ.**

**ಈಗ ವಾರ್ತೆಗಳ ವಿವರ**

**ಬೇಸಿಗೆ ಆರಂಭವಾದ ಹಿನ್ನೆಲೆ, ಗ್ರಾಮಗಳಲ್ಲಿ** ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಶರಣ್ ಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಸೇಡಂ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ನಡೆದ 'ಟಾಸ್ಕ್ ಫೋರ್ಸ್' ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೋರ್‌ವೆಲ್‌ಗಳು ಹಾಗೂ ಜಲ ಮೂಲಗಳನ್ನು ಪರೀಕ್ಷಿಸಿ ಕ್ರಮ ಕೈಗೊಂಡು ವರದಿ ಸಲ್ಲಿಸಬೇಕು ಎಂದರು.

<><><>

**ಮಾನವನ ಬದುಕಿನಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ** ಬಹು ಮುಖ್ಯ ಪಾತ್ರವಹಿಸಿವೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಭೋಸರಾಜು ಹೇಳಿದ್ದಾರೆ. ಮಡಿಕೇರಿಯ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಮಹಾವಿದ್ಯಾಲಯದ ಅಮೃತ ಮಹೋತ್ಸವ ಪ್ರಯುಕ್ತ, ಕನ್ನಡದಲ್ಲಿ 5ನೇ ವಿಜ್ಞಾನ ಮತ್ತು ತಂತ್ರಜ್ಞಾನ ಸಮ್ಮೇಳನದ, 'ಸುಸ್ಥಿರ ಅಭಿವೃದ್ಧಿಗಾಗಿ ವಿಜ್ಞಾನ ಮತ್ತು ತಂತ್ರಜ್ಞಾನ' ಕುರಿತು ಮೂರು ದಿನಗಳ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. 'ಸರ್ವರಿಗೂ ವಿಜ್ಞಾನ, ಸುಲಭ ವಿಜ್ಞಾನ, ಸುಸ್ಥಿರ ಅಭಿವೃದ್ಧಿಗಾಗಿ ವಿಜ್ಞಾನ' ಎಂಬ ಆಶಯದೊಂದಿಗೆ ನಾಡಿನಾದ್ಯಂತ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ವತಿಯಿಂದ ವಿಜ್ಞಾನವನ್ನು ಜನಪ್ರಿಯಗೊಳಿಸುವ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ವಿಜ್ಞಾನ ಮತ್ತು ತಂತ್ರಜ್ಞಾನದ ಬಗ್ಗೆ ವಿದ್ಯಾರ್ಥಿಗಳು, ಹೆಚ್ಚಿನ ಆಸಕ್ತಿ ಹೊಂದಿದಾಗ ಮಾತ್ರ ವೈಜ್ಞಾನಿಕವಾಗಿ ಸಂಶೋಧನೆಗಳನ್ನು ಕೈಗೊಳ್ಳಲು ಸಾಧ್ಯವಾಗಲಿದೆ ಎಂದರು. ವಿಜ್ಞಾನ ಮತ್ತು ತಂತ್ರಜ್ಞಾನದ ಬಗ್ಗೆ ಕನ್ನಡದಲ್ಲಿಯೇ ಮಾಹಿತಿ ದೊರೆಯುತ್ತಿದ್ದು, ಇದನ್ನು ಹೆಚ್ಚು ಬಳಸಬೇಕು. ಇದರಿಂದ ಹಂತ ಹಂತವಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಕನ್ನಡ ಭಾಷೆಯ ಬೆಳವಣಿಗೆಗೆ ಸಹಕಾರಿಯಾಗಲಿದೆ. ಆ ನಿಟ್ಟಿನಲ್ಲಿ ಪ್ರಯತ್ನಗಳು ನಡೆಯಬೇಕು ಎಂದು ಹೇಳಿದರು.

<><><>

**"ರಾಜ್ಯದ ಕೃಷಿ ಹಾಗೂ ಗ್ರಾಮೀಣ ಅಭಿವೃದ್ಧಿಯಲ್ಲಿ** ಪಶು ಸಂಗೋಪನಾ ಹಾಗೂ ಮೀನುಗಾರಿಕೆ ವಲಯಗಳು ಪ್ರಮುಖ ಪಾತ್ರವಹಿಸುತ್ತವೆ ಎಂದು ಪಶು ಸಂಗೋಪನೆ ಖಾತೆ ಸಚಿವ ಕೆ.ವೆಂಕಟೇಶ್ ಹೇಳಿದ್ದಾರೆ. ಬೀದರ ಹೊರವಲಯದ ಕಮಠಾಣ

ರಸ್ತೆಯ ನಂದಿನಗರ ಆವರಣದಲ್ಲಿ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ 14ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ರಾಜ್ಯ ಸರ್ಕಾರ, ಪಶುಗಳ ಆರೋಗ್ಯ ರಕ್ಷಣೆ ಮತ್ತು ಮೀನುಗಾರಿಕೆ ವಲಯದ ಸುಸ್ಥಿರ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದೆ. ರಾಜ್ಯದಲ್ಲಿ ಸುಮಾರು 2.9 ಕೋಟಿ ಜಾನುವಾರುಗಳಿವೆ. ಮೀನುಗಾರಿಕಾ ವಲಯವು ಸುಮಾರು 1.6 ಮಿಲಿಯನ್ ಜನರಿಗೆ ಉದ್ಯೋಗವನ್ನು ಒದಗಿಸಿದೆ. ರಾಜ್ಯದ ಆರ್ಥಿಕ ಬಲವರ್ಧನೆಗೆ ಈ ವಲಯಗಳು ಸಹಕಾರಿಯಾಗಿವೆ. ಈ ವಲಯಗಳ ಅಭಿವೃದ್ಧಿಗೆ ನುರಿತ ವೃತ್ತಿಪರರ ಅಗತ್ಯವಿದೆ. ಈ ವಿಶ್ವವಿದ್ಯಾಲಯವು ಅಂತಹ ಅಗತ್ಯವನ್ನು ಪೂರೈಸುವಲ್ಲಿ ಮಹತ್ವದ ಕೊಡುಗೆ ನೀಡುತ್ತಿದೆ ಎಂದರು. ಘಟಿಕೋತ್ಸವದಲ್ಲಿ 28 ಡಾಕ್ಟರೇಟ್ ಪದವಿ, 187 ಸ್ನಾತಕೋತ್ತರ ಹಾಗೂ 419 ಸ್ನಾತಕ ಪದವಿಗಳನ್ನು ಪ್ರದಾನಿಸಲಾಯಿತು. ಚಿತ್ರದುರ್ಗದ ರವೀನಾ, ಸ್ನಾತಕೋತ್ತರ ವಿಭಾಗದಲ್ಲಿ ಒಟ್ಟು 15 ಚಿನ್ನದ ಪದಕಗಳನ್ನು ಪಡೆದಿದ್ದಾರೆ. 2022–23 ನೇ ಸಾಲಿನಲ್ಲಿ ಬ್ಯಾಚುಲರ್ ಆಫ್ ವೆಟರ್ನರಿ ಸೈನ್ಸ್ ಅಂಡ್ ಅನಿಮಲ್ ಹಸ್ಬೆಂಡ್ರಿ ವಿಭಾಗದಲ್ಲಿ ಬೆಂಗಳೂರು ಜೆ.ಪಿ ನಗರದ ಆದಿತ್ಯ ಚಿದಾನಂದ ಈಶ್ವರ 9 ಚಿನ್ನದ ಪದಕಗಳಿಗೆ ಭಾಜನರಾಗಿದ್ದು, ಪ್ರದೇಶ ಸಮಾಚಾರದೊಂದಿಗೆ ಅವರು ತಮ್ಮ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ: ಆದಿತ್ಯ ಚಿದಾನಂದ ಈಶ್ವರ 31 ಸೆಕೆಂದುಗಳು**

<><><>

**ಕನ್ನಡ ರಾಜ್ಯೋತ್ಸವ ಪ್ರಶಸ್ತಿಯನ್ನು** ಇನ್ನು ಮುಂದೆ, ಅರ್ಜಿ ಸ್ವೀಕರಿಸದೇ ಸಾಧನೆ ಗುರುತಿಸಿ, ಅರ್ಹರಿಗೆ ನೀಡುವ ಅಗತ್ಯವಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ಕರ್ನಾಟಕ ಸಾಹಿತ್ಯ ಅಕಾಡೆಮಿ ವತಿಯಿಂದ ಬೆಂಗಳೂರಿನಲ್ಲಿ ಆಯೋಜಿಸಿದ್ದ, 2023ನೇ ಸಾಲಿನ ಗೌರವ ಪ್ರಶಸ್ತಿ, ಸಾಹಿತ್ಯಶ್ರೀ ಪ್ರಶಸ್ತಿ ಹಾಗೂ 2022ರ ಪುಸ್ತಕ ಬಹುಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪ್ರಶಸ್ತಿಗಳು ಅರ್ಜಿ ಸಲ್ಲಿಸಿ ಪಡೆಯುವಂತಾಗಬಾರದು. ಅರ್ಹರನ್ನು ಗುರುತಿಸಿ ಅವರ ಮನೆ ಬಾಗಿಲಿಗೆ ಪ್ರಶಸ್ತಿ ನೀಡಿ ಗೌರವಿಸುವಂತಾಗಬೇಕು. ಇದರಿಂದ ಪ್ರಶಸ್ತಿ ಮೌಲ್ಯವೂ ಹೆಚ್ಚಾಗಲಿದೆ. ಈ ಬಗ್ಗೆ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸುವುದಾಗಿ ತಿಳಿಸಿದರು.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ**

**ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.**

<><><>

**ಆಕಾಶವಾಣಿಯ ಬಹುಶ್ರುತ ಕಾರ್ಯಕ್ರಮ,** 'ಮನ್ ಕಿ ಬಾತ್' ಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 30, ಬರುವ ಭಾನುವಾರದಂದು, ಬೆಳಗ್ಗೆ 11 ಗಂಟೆಗೆ, ದೇಶದ ಜನತೆಯನ್ನುದ್ದೇಶಿಸಿ, ಮಾತನಾಡಲಿದ್ದಾರೆ. ಇದು ಮನದ ಮಾತಿನ 120ನೇ ಸಂಚಿಕೆಯಾಗಿದೆ. ಸಾರ್ವಜನಿಕರು ತಮ್ಮ ಅನಿಸಿಕೆ ಹಾಗೂ ಅಭಿಪ್ರಾಯಗಳನ್ನು, "ಮೈ ಜಿ.ಒ.ವಿ. ಓಪನ್ ಫೋರ್‌ಂ", "ನಮೋ ಆ್ಯಪ್" ಅಥವಾ ಉಚಿತ ಸಹಾಯವಾಣಿ ಸಂಖ್ಯೆ 1800–11–7800 ಮೂಲಕ ಹಂಚಿಕೊಳ್ಳಬಹುದು.

<><><>

**ಬಂಜಾರ ಸಂಸ್ಕೃತಿ ಮತ್ತು ಭಾಷಾ** ಅಕಾಡೆಮಿ ವತಿಯಿಂದ ನಾಳೆ ಸಂಜೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ರಾಜ್ಯಮಟ್ಟದ ಬಂಜಾರ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವ ಹಾಗೂ 2024ನೇ ಸಾಲಿನ ಪ್ರಥಮ ಶ್ರೀ ಸಂತ ಸೇವಾಲಾಲ್ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ಅಧ್ಯಕ್ಷ ಡಾಕ್ಟರ್ ಎ.ಆರ್. ಗೋವಿಂದಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಆವರು, ಪ್ರಶಸ್ತಿ ಪ್ರದಾನ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸುವರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಶಸ್ತಿ ಪ್ರದಾನ ಮಾಡಲಿದ್ದು, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವ ಶಿವರಾಜ ತಂಗಡಗಿ ಪ್ರಶಸ್ತಿ ವಿಜೇತರ ಕಿರು ಹೊತ್ತಿಗೆ ಬಿಡುಗಡೆ ಮಾಡುವರು. ಪ್ರಥಮ ಬಾರಿಗೆ 2024ನೇ ಸಾಲಿನ ಶ್ರೀ ಸಂತ ಸೇವಾಲಾಲ್ ಪ್ರಶಸ್ತಿಯನ್ನು ಡಾಕ್ಟರ್ ಬಿ.ಟಿ.ಲಲಿತ ನಾಯಕ್ ಅವರಿಗೆ ಪ್ರದಾನ ಮಾಡಲಾಗುತ್ತಿದೆ. ಪ್ರಶಸ್ತಿ ಮೊತ್ತ 1 ಲಕ್ಷ ರೂಪಾಯಿ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.

<><><>

**ಮಹಿಳೆಯು ಶಕ್ತಿಯ** ಪ್ರತೀಕ. ಮಹಿಳೆಯರನ್ನು ಗೌರವಿಸುವ ದೇಶ ನಮ್ಮದಾಗಿದೆ. ಮಹಿಳೆಯರು ಮುಂಚೂಣಿಯಲ್ಲಿರಬೇಕೆಂಬ ದೃಷ್ಟಿಯಿಂದ ಮಹಿಳೆಯರ ಅಭ್ಯುದಯಕ್ಕಾಗಿ ವಿಜಯಪುರ ಜಿಲ್ಲೆಯಲ್ಲಿ ಹಲವು ಯೋಜನೆಗಳನ್ನು ಜಾರಿಗೊಳಿಸಿ ಆ ಮೂಲಕ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದ್ದಾರೆ. 'ಮಹಿಳೆಯರ ಮತ್ತು ಹೆಣ್ಣು ಮಕ್ಕಳ ಹಕ್ಕುಗಳು, ಸಮಾನತೆ ಹಾಗೂ ಸಬಲೀಕರಣಕ್ಕಾಗಿ–ತ್ವರಿತ ಕ್ರಮ' ಎಂಬ ಧ್ಯೇಯದಡಿ ವಿಜಯಪುರದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚಾರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸಾಮಾಜಿಕ ಸ್ತರದಲ್ಲಿ ಮಹಿಳೆ ಸ್ವಾವಲಂಬಿಯಾಗಿ ತನ್ನ ಕುಟುಂಬವನ್ನು ಸಮರ್ಥವಾಗಿ ನಿಭಾಯಿಸುವ ದೃಷ್ಟಿಯಿಂದ ಹಲವಾರು ಯೋಜನೆಯನ್ನು ಸರ್ಕಾರ ಅನು ಷ್ಠಾನಕ್ಕೆ ತಂದಿದ್ದು, ಸಾಮಾಜಿಕ ಸಮಸ್ಯೆಗಳ ನಿವಾರಣೆಗೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ. ಮಹಿಳೆ ಆರ್ಥಿಕವಾಗಿ, ಸಾಮಾಜಿಕವಾಗಿ, ಸಾಂಸ್ಕೃತಿಕವಾಗಿ ಪ್ರಗತಿ ಪಥದಲ್ಲಿ ಮುನ್ನಡೆಯಲು ಸರ್ಕಾರ ಮಹಿಳೆಯರಿಗಾಗಿ ಹಲವು ಯೋಜನೆಗಳನ್ನು ಅನು ಷ್ಠಾನಗೊಳಿಸಿದೆ. ಮಹಿಳೆ ಶಿಕ್ಷಣ ಪಡೆಯುವ ಮೂಲಕ ಸ್ವಾವಲಂಬನೆಯತ್ತ ದಿಟ್ಟ ಹೆಜ್ಜೆ ಇಡಬೇಕು ಎಂದರು.

<><><>

**ಅಸ್ಸಾಂನ ಗುವಾಹಟಿಯಲ್ಲಿ ನಡೆದ ರಾಷ್ಟ್ರೀಯ** ಬಾಸ್ಕೆಟ್ ಬಾಲ್ ಚಾಂಪಿನ್‌ಶಿಪ್ ನಲ್ಲಿ ಕರ್ನಾಟಕ ಮಹಿಳಾ ತಂಡ ರನ್ನರ್–ಆಪ್ ಆಗಿದೆ. ಮಹಿಳಾ ವಿಭಾಗದ ಫೈನಲ್‌ನಲ್ಲಿ ರಾಜ್ಯ ತಂಡ, ತಮಿಳುನಾಡು ವಿರುದ್ಧ 58–76 ಅಂಕಗಳ ಅಂತರದಲ್ಲಿ ಪರಾಭವಗೊಂಡಿತು. ಮೊದಲಾರ್ಧದಲ್ಲಿ 29–28 ರಲ್ಲಿ ಮುನ್ನೆಡೆಯಲ್ಲಿದ್ದ ಹೊರತಾಗಿಯೂ, ರಾಜ್ಯಕ್ಕೆ ಗೆಲುವು ಸಿಗಲಿಲ್ಲ. ಕರ್ನಾಟಕ ತಂಡದಲ್ಲಿದ್ದ ಮಳವಳ್ಳಿ ತಾಲ್ಲೂಕಿನ ರಾವಣಿ ಗ್ರಾಮದ ಕುಮಾರಿ ಹಂಸ ಪ್ರತಿನಿಧಿಸಿದ್ದರು. ಈ ವಿಜೇತ ತಂಡಕ್ಕೆ, ಕರ್ನಾಟಕ ಬಾಸ್ಕೆಟ್ ಬಾಲ್ ಸಂಸ್ಥೆಯ ಕಾರ್ಯದರ್ಶಿ ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಡಾಕ್ಟರ್ ಕೆ.ಗೋವಿಂದರಾಜು 5 ಲಕ್ಷ ರೂಪಾಯಿ ಬಹುಮಾನ ಘೋಷಿಸಿದ್ದಾರೆ.

<><><>

## ಈಗ ಸಂಕ್ಷಿಪ್ತ ಸುದ್ದಿಗಳು

<><><>

**ಕಾವೇರಿ ನದಿ ರಕ್ಷಣಾ ಸಮಿತಿ ವತಿಯಿಂದ** ನ್ಯಾಯಯುತ ನೀರಿನ ಹಕ್ಕಿಗಾಗಿ ಒಂದು ದಿನದ ಕಾರ್ಯಾಗಾರ ಹಾಗೂ ವಿಚಾರ ಸಂಕಿರಣವನ್ನು ಬೆಂಗಳೂರಿನ ಕೆ.ಆರ್.ರಸ್ತೆಯ ಕೆಂಪೇಗೌಡ ಆಸ್ಪತ್ರೆ ಆವರಣದಲ್ಲಿ ಏಪ್ರಿಲ್ 5 ರಂದು ಆಯೋಜಿಸಲಾಗಿದೆ ಎಂದು ಸಮಿತಿಯ ಅಧ್ಯಕ್ಷ ಎಚ್.ಕೆ.ರಾಮು ಮಂಡ್ಯದಲ್ಲಿ ತಿಳಿಸಿದ್ದಾರೆ.

<><><>

**ಬೇಸಿಗೆಗಾಲ ಪ್ರಾರಂಭಗೊಂಡಿದ್ದು, ತಾಪಮಾನ** ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಜೈನ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><>

**ಕನ್ನಡ ಮತ್ತು ಸಂಸ್ಕೃತಿ** ಇಲಾಖೆಯಡಿ ಬರುವ ಡಾಕ್ಟರ್ ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನ, ಧಾರವಾಡ ಹಾಗೂ ಧಾರವಾಡದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಐ.ಕ್ಯೂ.ಎ.ಸಿ ಸಂಯುಕ್ತಾಶ್ರಯದಲ್ಲಿ ಹಾಗೂ ಕನ್ನಡ ವಿಭಾಗದ ನೇತೃತ್ವದಲ್ಲಿ ನಾಳೆ 'ಹಳೆಗನ್ನಡ ಓದು' ಪದವಿ ಪಠ್ಯಾಧಾರಿತ ರಾಷ್ಟ್ರಮಟ್ಟದ ಕಾರ್ಯಾಗಾರವನ್ನು ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

<><><>

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ಬೇಸಿಗೆ ಹಿನ್ನೆಲೆ, ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಲು ಸಚಿವ ಶರಣ್ ಪ್ರಕಾಶ್ ಪಾಟೀಲ್ ಅಧಿಕಾರಿಗಳಿಗೆ ಸೂಚನೆ.
- ವಿಜ್ಞಾನ ಮತ್ತು ತಂತ್ರಜ್ಞಾನ, ವೈಜ್ಞಾನಿಕ ಸಂಶೋಧನೆಗೆ ಸಹಕಾರಿ – ಸಚಿವ ಎನ್.ಎಸ್.ಭೋಸರಾಜು.
- ರಾಜ್ಯದ ಆರ್ಥಿಕ ಬಲವರ್ಧನೆಗೆ ಪಶು ಸಂಗೋಪನಾ ಹಾಗೂ ಮೀನುಗಾರಿಕೆ ವಲಯಗಳ ಪಾತ್ರ ಮಹತ್ವದ್ದು – ಸಚಿವ ಕೆ.ವೆಂಕಟೇಶ್
- ಅರ್ಜಿ ಸ್ವೀಕರಿಸದೇ, ಅರ್ಹ ಸಾಧಕರಿಗೆ ಪ್ರಶಸ್ತಿ ನೀಡುವ ಕುರಿತು ಕ್ರಮ ಕೈಗೊಳ್ಳಲು ಮುಖ್ಯಮಂತ್ರಿಯವರೊಂದಿಗೆ ಚರ್ಚೆ– ಸಚಿವ ಶಿವರಾಜ ತಂಗಡಗಿ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.